# Bangalore
# Regional News
# 27.02.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಹೋಟೆಲ್, ರಸ್ತೆ ಬದಿತಿನಿಸು ಕೇಂದ್ರಗಳಲ್ಲಿ ಪ್ಲಾಸ್ಟಿಕ್ ಬಳಸದಂತೆ ಆಹಾರ ಸಚಿವ ದಿನೇಶ್ ಗುಂಡೂರಾವ್ ಸೂಚನೆ
2. ಬೆಂಗಳೂರಿನಲ್ಲಿ ಗೆಫೆಕ್ಸ್ ಶೃಂಗಸಭೆಗೆ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ
3. ರಸಗೊಬ್ಬರಗಳನ್ನು ಕಡಿಮೆ ಬಳಸುವಂತೆ ರೈತರಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸಲಹೆ
4. ವಿಧಾನಸೌಧದಲ್ಲಿ ಇಂದಿನಿಂದ ಪುಸ್ತಕ ಮೇಳ : ಸಾರ್ವಜನಿಕರಿಗೆ ಮುಕ್ತ ಅವಕಾಶ
5. ತೆಲಂಗಾಣಕ್ಕೆ 1.24 ಟಿಎಂಸಿ ನೀರು ಬಿಡುಗಡೆ – ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ ಅಸಮಾಧಾನ

****************

ಆಹಾರ ತಯಾರಿಕೆಯಲ್ಲಿ ಅದರಲ್ಲೂ ಇತ್ತೀಚೆಗೆ ಹೆಚ್ಚಾಗಿ ಇಡ್ಲಿ ತಯಾರಿಕೆಯಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗಿದ್ದು, ಇದು ಸಾರ್ವಜನಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು ಹೋಟೆಲ್, ಉಪಹಾರ ಕೇಂದ್ರಗಳಲ್ಲಿ ಇಡ್ಲಿ ತಯಾರಿಕೆಯಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗಿದೆ. ಇನ್ನೆರಡು ದಿನಗಳಲ್ಲಿ ಈ ಕುರಿತು ಅಧಿಕೃತವಾಗಿ ಸುತ್ತೋಲೆ ಹೊರಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಹೋಟೆಲ್, ರಸ್ತೆಬದಿ ತಿಂಡಿ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್ ಬಳಸಬಾರದು ಎಂದು ಅವರು ಸೂಚನೆ ನೀಡಿದ್ದಾರೆ.

ಸುಮಾರು 251 ಹೋಟೆಲ್, ಅಂಗಡಿಗಳಿಂದ ಸ್ಯಾಂಪಲ್ಸ್ ಪಡೆಯಲಾಗಿತ್ತು. ಅವುಗಳ ಪೈಕಿ 51 ಕಡೆ ಸಂಗ್ರಹಿಸಿದ್ದ ಸ್ಯಾಂಪಲ್ಸ್ ಅಸುರಕ್ಷಿತ ಎಂಬುದು ಪ್ರಯೋಗಾಲಯ ಪರೀಕ್ಷೆಯಲ್ಲಿ ದೃಢಪಟ್ಟಿದೆ. ಅವುಗಳಲ್ಲಿ ಕಾರ್ಸಿನೋಜೆನಿಕ್ ಅಂಶ ಪತ್ತೆಯಾಗಿದೆ ಎಂದು ಮಾಹಿತಿ ನೀಡಿದ್ದಾರೆ.

****************

ಬೆಂಗಳೂರಿನಲ್ಲಿ ಇಂದಿನಿಂದ ಮೂರು ದಿನಗಳ ಕಾಲ ನಡೆಯಲಿರುವ ಗೆಫೆಕ್ಸ್ ಶೃಂಗಸಭೆಗೆ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಸೃಜನ ಶೀಲತೆ, ತಂತ್ರಜ್ಞಾನ ಮತ್ತು ನಾವೀನ್ಯತೆಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ ಎಂದು ಹೇಳಿದರು.

ಈ ಬಾರಿಯ ಗೆಫೆಕ್ಸ್ ಶೃಂಗಸಭೆಯಲ್ಲಿ ಕರ್ನಾಟಕವು ಭಾರತದ ಡಿಜಿಟಲ್ ಸೃಜನಶೀಲ, ಕ್ರಾಂತಿಯ ಕೇಂದ್ರ ಬಿಂದುವಾಗಿದೆ ಎಂದು ಅಭಿಪ್ರಾಯಪಟ್ಟರು.

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು, ಮಾತನಾಡಿ, ಮೇ 1 ರಿಂದ 4ರವರೆಗೆ ಮುಂಬೈನಲ್ಲಿ ವೇವ್ಸ್ ಶೃಂಗಸಭೆ ಏರ್ಪಡಿಸಲಾಗುತ್ತಿದ್ದು, ಹಿಂದೆಂದೂ ಕಂಡರಿಯದ ರೀತಿಯಲ್ಲಿ ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರಕ್ಕೆ ಸಂಬಂಧಪಟ್ಟ ತಜ್ಞರು ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಭಾರತವನ್ನು ವಿಷಯ ರಚನಾಕಾರರ ಮುಖ್ಯ ತಾಣವಾಗಿ ಹಾಗೂ ಭಾರತದ ಸಾಂಪ್ರದಾಯಿಕ ಕತೆಗಳನ್ನು ಪ್ರಸಾರ ಮಾಡುವ ಜೊತೆಗೆ ಕೇಸರಿ ಅರ್ಥವ್ಯವಸ್ಥೆ ಸೃಷ್ಟಿಸುವ ಪ್ರಧಾನಮಂತ್ರಿಯವರ ಕನಸನ್ನು ನನಸು ಮಾಡಲು ಈ ಕ್ಷೇತ್ರದ ಧುರೀಣರು ವೇವ್ಸ್ ಶೃಂಗಸಭೆಯಲ್ಲಿ ಭಾಗಿಯಾಗಲಿದ್ದಾರೆ ಎಂದು ಹೇಳಿದರು.

ವಿಶ್ವದ ಮನರಂಜನಾ ಮತ್ತು ಡಿಜಿಟಲ್ ಗೇಮಿಂಗ್ ಕ್ಷೇತ್ರದಲ್ಲಿ ಭಾರತದ ಪಾಲು ಕೇವಲ ಶೇಕಡ 2ರಷ್ಟಿದ್ದು, ಇದನ್ನು ಹೆಚ್ಚಿಸಲು ಪ್ರತಿಭಾವಂತ ವಿಷಯ ರಚನಕಾರರು ಹಾಗೂ ಪಾರಂಪರಿಕ ಕಥಾ ಸಂಪನ್ಮೂಲದ ನೆರವಿನಿಂದ ವಿಶ್ವಮಟ್ಟದಲ್ಲಿ ಭಾರತವನ್ನು ಕೊಂಡೊಯ್ಯುವ ಪ್ರಯತ್ನ ಮಾಡಬೇಕು ಎಂದು ಕರೆ ನೀಡಿದರು.

ಶೃಂಗಸಭೆಯಲ್ಲಿ ಬಯೋಕಾನ್ ಸಂಸ್ಥೆ ಮುಖ್ಯಸ್ಥೆ – ರಾಜ್ಯ ಸರ್ಕಾರದ ಐಟಿಬಿಟಿ ಸಲಹಾ ತಜ್ಞೆಯಾಗಿ ಕಾರ್ಯನಿರ್ವಹಿಸುತ್ತಿರುವ ಕಿರಣ್ ಮಜುಂದಾರ್ ಶಾ ಹಾಗೂ ಕಿಯೋನಿಕ್ಸ್ ಸಂಸ್ಥೆಯ ಮುಖ್ಯಸ್ಥರಾದ ಶರತ್ ಬಚ್ಚೇಗೌಡ, ಎಬಿಎಐ ಅಧ್ಯಕ್ಷ ಬೀರೆನ್ ಘೋಷ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

****************

ಬೆಂಗಳೂರಿನ ಹೆಸರಘಟ್ಟದಲ್ಲಿ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯಲ್ಲಿ ರಾಷ್ಟ್ರೀಯ ತೋಟಗಾರಿಕಾ ಮೇಳಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಲ್ಲಿ ನಮ್ಮ ದೇಶದ ಕೃಷಿಕರು, ಸರ್ಕಾರದ ಯೋಜನೆಗಳ ಪರಿಣಾಮವಾಗಿ ಆಹಾರಧಾನ್ಯ, ಹಣ್ಣುಗಳನ್ನು ಬೆಳೆಯುವ ಮೂಲಕ ಪ್ರಗತಿ ಸಾಧಿಸಿದ್ದಾರೆ ಎಂದು ಹೇಳಿದರು. ಇದೇ ವೇಳೆ ರಸಗೊಬ್ಬರಗಳನ್ನು ಆದಷ್ಟು ಕಡಿಮೆ ಬಳಸುವಂತೆ ರೈತರಿಗೆ ಸಲಹೆ ನೀಡಿದ್ದಾರೆ. ರೈತರು ಕೃಷಿಯ ಜತೆಗೆ ಪಶುಸಂಗೋಪನೆ, ಮೀನುಗಾರಿಕೆಗೂ ಆದ್ಯತೆ ನೀಡುವಂತೆ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಹಲವು ರೈತರನ್ನು ಸನ್ಮಾನಿಸಲಾಯಿತು.

ಧ್ವನಿ: ಶೋಭಾ ಕರಂದ್ಲಾಜೆ

ಈ ಬಾರಿ ಆರ್ಕಾ ಗೊಂಬೆ ಆಟದ ಮೂಲಕ ರೈತರಿಗೆ ಆಧುನಿಕ ತೋಟಗಾರಿಕಾ ತಂತ್ರಜ್ಞಾನವನ್ನು ಪರಿಚಯಿಸಲು ಇಲಾಖೆ ನಿರ್ಧರಿಸಿದೆ. ರೈತರ ಬದುಕು ಮತ್ತು ಕೃಷಿಯನ್ನು ಗಮನದಲ್ಲಿಟ್ಟುಕೊಂಡು ರೈತರು ಹಾಗೂ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆ ಸುತ್ತ ಕೃಷಿ ವಿಜ್ಞಾನಿ, ಡಾ. ರಮ್ಯಾ ಎಚ್.ಆರ್. ಹೆಣೆದಿರುವ ಕಥೆಯನ್ನು ಪ್ರದರ್ಶಿಸಲಾಗುತ್ತಿದೆ.

****************

ವಿಧಾನಸೌಧ ಆವರಣದಲ್ಲಿ ಇದೇ ಮೊಟ್ಟ ಮೊದಲ ಬಾರಿಗೆ ಪುಸ್ತಕ ಮೇಳ ಆಯೋಜಿಸಲಾಗಿದೆ. ಇಂದಿನಿಂದ ಮಾರ್ಚ್ 2 ರವರೆಗೆ ನಾಲ್ಕು ದಿನಗಳ ಕಾಲ ನಡೆಯುವ ಮೇಳದಲ್ಲಿ ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಸಂಜೆ ಪುಸ್ತಕ ಮೇಳವನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಅನೇಕ ಬರಹಗಾರರು ತಮ್ಮ ಕೃತಿಗಳನ್ನು ಬಿಡುಗಡೆ ಮಾಡಲಿದ್ದಾರೆ. ಮಕ್ಕಳ ಸಾಹಿತ್ಯ, ಸಿನಿಮಾ, ಸಂವಿಧಾನ ಮತ್ತು ಕನ್ನಡ ಸಾಹಿತ್ಯದಂತಹ ವಿಷಯಗಳ ಕುರಿತು ಬರಹಗಾರರು ಮತ್ತು ತಜ್ಞರೊಂದಿಗೆ ಪ್ರತಿದಿನ ಸಂವಾದ ನಡೆಯಲಿದೆ.

ಪ್ರತಿದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಕವಿಗೋಷ್ಠಿ ನಡೆಯಲಿದೆ.

****************

ರಾಜ್ಯ ಸರ್ಕಾರ ಬಿರು ಬೇಸಿಗೆಯನ್ನೂ ಲೆಕ್ಕಿಸದೆ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಿಂದ 1.24 ಟಿಎಂಸಿ ನೀರನ್ನು ತೆಲಂಗಾಣ ರಾಜ್ಯಕ್ಕೆ ಹರಿಸುತ್ತಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ.

ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ, ಅಧಿಕಾರಿಗಳು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ನೀರು ಬಿಟ್ಟರೆ ರಾಜ್ಯಕ್ಕೆ ತೊಂದರೆಯಾಗುತ್ತದೆ ಎಂದು ಮನವರಿಕೆ ಮಾಡಿಕೊಟ್ಟಿದ್ದರೂ ನೀರು ಬಿಡುಗಡೆಗೆ ಸಮ್ಮತಿಸಿದ್ದಾರೆ.

ರೈತ ಪರ ಸಂಘಟನೆಗಳ ವಿರೋಧದ ನಡುವೆಯೂ ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ತೆಲಂಗಾಣಕ್ಕೆ ನೀರು ಹರಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಜನಸಾಮಾನ್ಯರ ಹಿತರಕ್ಷಣೆಗಿಂತ ತಮ್ಮ ರಾಜಕೀಯ ಸ್ವಾರ್ಥವೇ ಮುಖ್ಯವಾಗಿದೆಯಾ ಎಂದು ಪ್ರಶ್ನಿಸಿರುವ ಅವರು, ಕನ್ನಡಿಗರಿಗೆ ನೀರು ಕೊಡದೆ, ಪರರಾಜ್ಯಗಳಿಗೆ ನೀರು ಕೊಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಸ್ವಾಭಿಮಾನಿ ಕನ್ನಡಿಗರೆಲ್ಲರೂ ತಕ್ಕ ಪಾಠ ಕಲಿಸಬೇಕು ಎಂದು ಒತ್ತಾಯಿಸಿದ್ದಾರೆ.

****************

ಉಚ್ಚ ನ್ಯಾಯಾಲಯದ ಆದೇಶದಂತೆ ನಾಳೆ ಚಿಕ್ಕಮಗಳೂರಿನ ಐ.ಡಿ.ಎಸ್.ಜಿ ಕಾಲೇಜಿನಲ್ಲಿ 2021ರಲ್ಲಿ ನಡೆದಿದ್ದ ವಿಧಾನ ಪರಿಷತ್ ಚುನಾವಣೆಯ ಮರು ಮತ ಎಣಿಕೆ ಕಾರ್ಯ ನಡೆಯಲಿದೆ. ಇದಕ್ಕಾಗಿ ಜಿಲ್ಲಾಡಳಿತ ಸೂಕ್ತ ವ್ಯವಸ್ಥೆ ಮಾಡಿಕೊಂಡಿದೆ.

ಈ ಬಗ್ಗೆ ಮಾಧ್ಯಮ ಪ್ರಕಟಣೆ ನೀಡಿರುವ ಜಿಲ್ಲಾಧಿಕಾರಿ ಮೀನಾ ನಾಗರಾಜ್, ಮತ ಎಣಿಕೆ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು ಬಿಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ. ಚಿಕ್ಕಮಗಳೂರು ತಾಲೂಕಿನಾದ್ಯಂತ ನಾಳೆ ಮದ್ಯ ಮಾರಾಟ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

2021 ರಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಸ್ಥಳೀಯ ಕ್ಷೇತ್ರಗಳ ವಿಧಾನ ಪರಿಷತ್ ಚುನಾವಣೆ ನಡೆದಿದ್ದು ಈ ಚುನಾವಣೆಯಲ್ಲಿ ಬಿ.ಜೆ.ಪಿ ಅಭ್ಯರ್ಥಿ ಪ್ರಸ್ತುತ ವಿಧಾನ ಪರಿಷತ್ ಉಪ ಸಭಾಪತಿ ಎಂ.ಕೆ ಪ್ರಾಣೇಶ್ 6 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು.

ಈ ಚುನಾವಣೆಯಲ್ಲಿ 12 ನಾಮ ನಿರ್ದೇಶನ ಸದಸ್ಯರು ಮತ ಚಾಲಾಯಿಸಿದ್ದರು. ಚುನಾವಣೆಯಲ್ಲಿ ಪರಾಭವಗೊಂಡಿದ್ದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಗಾಯತ್ರಿ ಶಾಂತೇಗೌಡ ಫಲಿತಾಂಶವನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ್ದರು.

****************

ವಿಜಯಪುರ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿ ಪ್ರಗತಿ ಪರಿಶೀಲನಾ ಸಭೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಪಿಎಂ ಸ್ವನಿಧಿ, ಸ್ವ-ನಿಧಿ ಸೇ ಸಮೃದ್ಧಿ ಯೋಜನೆಯಡಿ 8 ಸಾಮಾಜಿಕ ಭದ್ರತಾ ಯೋಜನೆಗಳ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಕ್ರಮ ವಹಿಸುವಂತೆ ಸೂಚನೆ ನೀಡಲಾಯಿತು.

ಅಮೃತ 2.0 ಯೋಜನೆಯ ಅಮೃತ್ ಮಿತ್ರ ಕಾರ್ಯಕ್ರಮದಡಿ ಟೆಂಡರ್ ಪ್ರಕ್ರಿಯೆ ಮುಕ್ತಾಯವಾಗಿದ್ದು, ಅರ್ಹತೆ ಪಡೆದ ಮಹಿಳಾ ಸ್ವಸಹಾಯ ಸಂಘಗಳಿಗೆ ಕಾಮಗಾರಿ ಆದೇಶ ನೀಡಲು ಕ್ರಮ ವಹಿಸುವಂತೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚಿಸಲಾಯಿತು.

ಜಿಲ್ಲೆಯಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜನೆಗೆ ಸೂಕ್ತ ಸ್ಥಳ ಗುರುತಿಸುವುದು, ಉದ್ಯೋಗಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಲು ಸೂಕ್ತ ಪ್ರಚಾರ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಲಾಯಿತು.

****************

ಪೋಷಕರು ಲಿಂಗ ತಾರತಮ್ಯ ಮಾಡದೇ ಹೆಣ್ಣು ಹಾಗೂ ಗಂಡು ಮಕ್ಕಳನ್ನು ಸಮಾನವಾಗಿ ಕಾಣಬೇಕು ಎಂದು ಯಾದಗಿರಿ ಜಿಲ್ಲೆಯ ಶಹಾಪುರ ನಗರದ ಹೆಚ್ಚುವರಿ ನ್ಯಾಯಾಲಯದ ನ್ಯಾಯಾಧೀಶ ಬಸವರಾಜ್ ತಿಳಿಸಿದ್ದಾರೆ.

ಬಾಲಕಿಯರ ವಸತಿ ನಿಲಯದಲ್ಲಿ ಹಮ್ಮಿಕೊಂಡಿದ್ದ ಭೇಟಿ ಬಚಾವೊ ಭೇಟಿ ಪಡಾವೊ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಳೆಯರು ಅಕ್ಷರದ ಕ್ರಾಂತಿಯ ಕಡೆ ಸಾಗಿದಾಗ ಸಮ ಸಮಾಜ ನಿರ್ಮಿಸಲು ಸಾಧ್ಯ. ಪ್ರತಿಯೊಬ್ಬರು ಕಾನೂನು ಜ್ಞಾನವನ್ನು ಪಡೆದುಕೊಳ್ಳಬೇಕು ಎಂದು ಹೇಳಿದ್ದಾರೆ.

****************

ಕರಾವಳಿ ಜಿಲ್ಲೆಗಳಲ್ಲಿ ಮುಂದಿನ ಎರಡು ದಿನಗಳ ಕಾಲ ತಾಪಮಾನ ಏರಿಕೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕಾರವಾರದಲ್ಲಿ ಅತಿ ಹೆಚ್ಚು 38.4 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

ಹೊನ್ನಾವರದಲ್ಲಿ 38.2, ದಕ್ಷಿಣಕನ್ನಡ ಜಿಲ್ಲೆಯ ಪಣಂಬೂರಿನಲ್ಲಿ 38.3 ಡಿಗ್ರಿ ಸೆಲ್ಸಿಯೆಸ್ ಉಷ್ಣಾಂಶ ದಾಖಲಾಗಿದೆ.

ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ ಜಿಲ್ಲೆಗಳಲ್ಲಿ ಕೂಡ ಬಿಸಿಲು ಹೆಚ್ಚಿರಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

****************

ಸಂಕ್ಷಿಪ್ತ ಸುದ್ದಿಗಳು

1. ಸೂರು ವಂಚಿತ ಅರ್ಹ ಫಲಾನುಭವಿಗಳಿಗೆ ದೃಢೀಕರಣ ಪತ್ರವನ್ನು ನೀಡುವುದು ಶಾಶ್ವತ ಸೂರಿನ ಭದ್ರತೆ ನೀಡಿದಂತೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ
2. ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ರಾಷ್ಟ್ರೀಯ ಸೇವಾ ಯೋಜನೆ, ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ನೇತೃತ್ವದಲ್ಲಿ ನಾಳೆ ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮ ನಡೆಯಲಿದೆ.
3. ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ವಿಜಯಪುರ ಜಿಲ್ಲೆಯ 63 ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಆದೇಶ ಹೊರಡಿಸಿದ್ದಾರೆ.

********ಮುಕ್ತಾಯ********